**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ. ಸಿ. ನಂ. 31/2024**

**ಚಾ.ಸಾಃ 18, ಫ್ರಾ.ಸಾಃ 8**

| | |
|---|---|
| ಸಾಕ್ಷಿದಾರನ ಹೆಸರು | ಮಹಾಂತೇಶ ನಾಯ್ಕ |
| ತಂದೆಯ ಹೆಸರು | ಉದಯ ನಾಯ್ಕ |
| ವಯಸ್ಸು | 35 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ರಾಮನಗರ ಪೋಲೀಸ್ ಠಾಣೆ ಜೊಯಿಡಾ ತಾಲೂಕು |
| ವಾಸ್ತವ್ಯ | ರಾಮನಗರ |

**ಸಾಕ್ಷಿಯನ್ನು ದಿನಾಂಕಃ 25-09-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 13-04-2021 ರಿಂದ 12-09-2024 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 13-11-2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 07-00 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.226/2023 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-23 ಎಂದು, ಸಾಕ್ಷಿ ಸಹಿಯನ್ನು ನಿಪಿ-23(ಎ) ಎಂದು ಗುರುತಿಸಲಾಯಿತು.

ದಿನಾಂಕ 14-11-2023 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಬೆಳಿಗ್ಗೆ 11-00 ರಿಂದ 12-00 ಗಂಟೆ ಸಮಯದಲ್ಲಿ ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆ ತಯಾರಿಸಿ ಸ್ಥಳದ ಫೋಟೋ ತೆಗೆಸಿರುತ್ತೇನೆ. ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು, ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ-4 ರಿಂದ 6 ಎಂದು ಗುರುತಿಸಲಾಗಿದೆ.

ಅದೇ ದಿನ ಮಧ್ಯಾಹ್ನ 12-30 ರಿಂದ 01-30 ರ ಸಮಯದಲ್ಲಿ ಠಾಣಾ ಆವರಣದಲ್ಲಿ ನಿಲ್ಲಿಸಿದ್ದ ಅಪಘಾತಕ್ಕೊಳಗಾಗಿದ್ದ ಕಾರು ಮತ್ತು ಬೈಕನ್ನು ಚಾಸಾ-1 ರವರು ಗುರುತಿಸಿದ್ದು ಅದೇ ಪಂಚರ ಸಮಕ್ಷಮ ಪಂಚನಾಮೆ ಅಡಿಯಲ್ಲಿ ಕಾರು ಮತ್ತು ಬೈಕನ್ನು ಅಮಾನತ್ತುಪಡಿಸಿಕೊಂಡು ಫೋಟೋ ತೆಗೆಸಿರುತ್ತೇನೆ.

ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ-7 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-7(ಸಿ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ-8 ರಿಂದ 11 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ-7 ಮತ್ತು 8 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 14-11-2023 ರಂದು ಕಾರು ಮಾಲೀಕರಿಗೆ ಕಲಂ 133 ರಡಿಯಲ್ಲಿ ನೋಟೀಸು ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸನ್ನು ನೋಡುತ್ತಿದ್ದು ನಿಪಿ-24 ಎಂದು, ಸಾಕ್ಷಿ ಸಹಿಯನ್ನು ನಿಪಿ-24(ಎ) ಎಂದು, ಉತ್ತರವನ್ನು ನೋಡುತ್ತಿದ್ದು ನಿಪಿ-25 ಎಂದು, ಸಾಕ್ಷಿ ಸಹಿಯನ್ನು ನಿಪಿ-25(ಎ) ಎಂದು ಗುರುತಿಸಲಾಯಿತು. ಅದೇ ದಿನ ಮಾಲೀಕರಿಂದ ಇಂಡೆಮ್ನಿಟಿ ಬಾಂಡ್ ಪಡೆದುಕೊಂಡು ಕಾರನ್ನು ಇಮ್ರಾನ್ ಖಾನ್ ರವರ ಸ್ವಾಧೀನಕ್ಕೆ ನೀಡಿರುತ್ತೇನೆ.

ಅದೇ ದಿನ ಅಪಘಾತಪಡಿಸಿದ ಆರೋಪಿಯನ್ನು ಬಂಧಿಸಿ ಜಾಮೀನಿನ ಮೇಲೆ ಆತನನ್ನು ಬಿಡುಗಡೆ ಮಾಡಿರುತ್ತೇನೆ. ಅದೇ ದಿನ ಚಾಸಾ-14 ರವರಿಂದ ಕಲಂ 65-ಬಿ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-26 ಎಂದು ಗುರುತಿಸಲಾಯಿತು.

ದಿನಾಂಕ 16-11-2023 ರಂದು ಅಪಘಾತದ ಗಾಯಾಳು ಮೃತಪಟ್ಟಿದ್ದು ಈ ಬಗ್ಗೆ ಉಡುಪಿ ನಗರ ಠಾಣೆಯಿಂದ ಇ-ಮೇಲ್ ಬಂದಿದ್ದರಿಂದ ಅದನ್ನು ಕಡತಕ್ಕೆ ಅಳವಡಿಸಿ ಕಲಂ 304 ಎ ರಡಿಯಲ್ಲಿ ತನಿಖೆ ನಡೆಸಲು ಮಾನ್ಯ ನ್ಯಾಯಾಲಯಕ್ಕೆ ಅನುಮತಿ ಕೋರಿ ಮನವಿ ಸಲ್ಲಿಸಿರುತ್ತೇನೆ. ಸದರಿ ಮನವಿಯನ್ನು ಈಗ ನೋಡುತ್ತಿದ್ದು ನಿಪಿ-27 ಎಂದು ಗುರುತಿಸಲಾಯಿತು.

ಅದೇ ದಿನ ಮೃತನ ಶವ ಪಂಚನಾಮೆಯನ್ನು ತಯಾರಿಸಿಕೊಂಡು ಬರುವಂತೆ ಚಾಸಾ-17 ರವರಿಗೆ ಜ್ಞಾಪನ ನೀಡಿರುತ್ತೇನೆ. ಅದರಂತೆ ಸದರಿಯವರು ಮೃತನ ಶವತನಿಖಾ ವರದಿಯನ್ನು ತಯಾರಿಸಿ ನನಗೆ ಹಾಜರುಪಡಿಸಿರುತ್ತಾರೆ. ಅದನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಶವತನಿಖಾ ವರದಿಯನ್ನು ನೋಡುತ್ತಿದ್ದು ನಿಪಿ-28 ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ-1, 7 ಮತ್ತು 8 ರವರ ಮರುಹೇಳಿಕೆ ಪಡೆದಿರುತ್ತೇನೆ.

ದಿನಾಂಕ 18-11-2023 ರಂದು ಚಾಸಾ-15 ರವರಿಂದ ಕಲಂ 65-ಬಿ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-29 ಎಂದು ಗುರುತಿಸಲಾಯಿತು.

ನಂತರ ಕೇಸಿನ ಕಡತವನ್ನು ಚಾಸಾ-19 ರವರಿಗೆ ವಹಿಸಿರುತ್ತೇನೆ.

ನಾನು ಬಂಧಿಸಿದ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಗೈರು ಹಾಜರು. ಗುರುತಿನ ಬಗ್ಗೆ ತಕರಾರು ಇಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ. ಆರ್. ನಾಯ್ಕರಿಂದಃ**

ನಾನು ಗಸ್ತು ತಿರುಗುತ್ತಿದ್ದ ಕಾಲಕ್ಕೆ ಅಪಘಾತದ ವಿಚಾರ ತಿಳಿದು ದೂರು ದಾಖಲಾಗುವ ಮೊದಲೇ ಅಪಘಾತ ಸ್ಥಳಕ್ಕೆ ಹೋಗಿ ಬಂದಿದ್ದೆ. ಸ್ಥಳಕ್ಕೆ ಹೋದಾಗ ಸ್ಥಳದಲ್ಲಿ ಇದ್ದ ಸ್ಥಿತಿಯಲ್ಲಿ ಫೋಟೋ



ಚಾ.ಸಾಃ 18, ಪ್ರಾ.ಸಾಃ 8

ತೆಗೆಸಿರುತ್ತೇನೆ. ಅದನ್ನು ಕಡತಕ್ಕೆ ಅಳವಡಿಸಿರುತ್ತೇನೆ. ಅಪಘಾತ ಆದ ಸ್ಥಳವು ರಾಷ್ಟ್ರೀಯ ಹೆದ್ದಾರಿಯ ಮಧ್ಯದ ಡಿವೈಡರ್ ಸ್ಥಳದಿಂದ ಪೂರ್ವಕ್ಕೆ 5 ಅಡಿ ದೂರದಲ್ಲಿ ಅಪಘಾತ ಆಗಿರುತ್ತದೆ. ಸ್ಥಳದಲ್ಲಿ ಮೋಟಾರು ಸೈಕಲ್ ಬ್ರೇಕ್ ಹಾಕಿದ ಮಾರ್ಕಗಳು ಇರಲಿಲ್ಲ. ಮೋಟಾರು ಸೈಕಲ್ ರಸ್ತೆಯ ಮೇಲೆ ಎಳೆದುಕೊಂಡು ಹೋದ ಕುರುಹುಗಳು ಇರಲಿಲ್ಲ. ನಾನು ಸ್ಥಳಕ್ಕೆ ಹೋದಾಗ ಸ್ಥಳದಲ್ಲಿ ಅಪಘಾತದ ಕುರುಹು ಇರಲಿಲ್ಲ. ಚಾಸಾ-1 ರವರು ತೋರಿಸಿದ್ದರಿಂದ ಸದರಿ ಸ್ಥಳವನ್ನು ಅಪಘಾತ ಸ್ಥಳ ಎಂದು ಹೇಳುತ್ತಿದ್ದೀರಾ ಎಂದರೆ ನಾನು ಪಂಚನಾಮೆ ಮಾಡುವ ಪೂರ್ವದಲ್ಲಿ ಅಪಘಾತವಾದ ತಕ್ಷಣವೇ ಸ್ಥಳಕ್ಕೆ ಹೋಗಿದ್ದು ಅದರಂತೆ ಸದರಿ ಸ್ಥಳದಲ್ಲಿ ಪಂಚನಾಮೆ ಮಾಡಿರುತ್ತೇನೆ. ನಾನು ಸ್ಥಳದಲ್ಲಿ ಯಾವುದೇ ಪಂಚನಾಮೆ ಮತ್ತು ಕಚ್ಚಾ ನಕಾಶೆ ತಯಾರಿಸಿಲ್ಲ, ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಕಾರನ್ನು ಅದರ ಮಾಲೀಕರೇ ಠಾಣೆಗೆ ತಂದಿದ್ದರು. ಅಪಘಾತವು ಕಾರಿನ ಎಡಭಾಗದ ಡೋರ್ ಹತ್ತಿರ ಆಗಿರುತ್ತದೆ. ಸಾಕ್ಷಿದಾರರು ಯಾವುದೇ ಹೇಳಿಕೆ ನೀಡದಿದ್ದರೂ ಕೇಸಿಗೆ ಅನುಕೂಲವಾಗುವಂತೆ ಬರೆದುಕೊಂಡಿದ್ದೇನೆ ಎಂದರೆ ಸರಿಯಲ್ಲ. ಅಪಘಾತವು ಮೋಟಾರು ಸೈಕಲ್ ಸವಾರನ ತಪ್ಪಿನಿಂದ ಆಗಿರುವುದು ಕಂಡುಬಂದಿದ್ದರೂ ಆತನ ಕುಟುಂಬದವರಿಗೆ ಸಹಾಯವಾಗಲಿ ಎನ್ನುವ ಉದ್ದೇಶಕ್ಕೆ ಸುಳ್ಳು ಪ್ರಕರಣ ದಾಖಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**